# SINDHI PRE UNIVERSITY COLLEGE

#68, Chokkanahalli, Thanisandra Main Road, Yelahanka Hobli, Bengaluru -64

Date : 09/03/2022

## II PU SUPPLEMENTARY EXAMINATION FEES DETAILS

**(As per PUE Circular date - 08/03/2022)**

**Extended last date for fee payment – 12/03/2022**

- One Subject : Rs. 190/-
- Two Subjects : Rs.320/-
- Three & above : Rs. 450/-

\+ Fine Rs. 2520/-

Pallavi 9/3/22

PRINCIPAL

**ಕರ್ನಾಟಕ ಸರ್ಕಾರ**

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.**

ಸಂಖ್ಯೆ: ಪಪೂಶಿಇ/ಪರೀಕ್ಷೆ/ಖಾ.ಅ.ನೊ & ಪು.ವಿ.ದಿ.ವಿ/05/2021-22 ದಿನಾಂಕ: 08/03/2022

**ಸುತ್ತೋಲೆ**

ವಿಷಯ: 2022ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳಾಗಿ ಹಾಗೂ ಅನುತ್ತೀರ್ಣ ಹಾಗೂ ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಹೆಚ್ಚುವರಿಯಾಗಿ ದಿನಾಂಕವನ್ನು ನೀಡುವ ಬಗ್ಗೆ.

ಉಲ್ಲೇಖ: 1. ಪಪೂಶಿಇ/ಪರೀಕ್ಷೆ/ಖಾ.ಅ.ನೊ.ದಿ.ವಿ/04/2021-22 ದಿನಾಂಕ: 21-01-2022.
2. ಪಪೂಶಿಇ/ಪರೀಕ್ಷೆ/ವಾ.ಪ.ಪು.ಅ.ದಿ.ವಿ/03/2021-22 ದಿನಾಂಕ: 21-01-2022.

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳನ್ವಯ 2022ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳಾಗಿ ನೊಂದಾಯಿಸಿಕೊಳ್ಳಲು ಹಾಗೂ ಅನುತ್ತೀರ್ಣ ಹಾಗೂ ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಉಲ್ಲೇಖಿತ ಸುತ್ತೋಲೆಗಳಲ್ಲಿ ದಿನಾಂಕ: 31-01-2022 ರವರೆಗೆ ಪರೀಕ್ಷಾ ಶುಲ್ಕದ ಜೊತೆಗೆ ದಂಡ ಶುಲ್ಕ 500/- ಮತ್ತು ದಂಡ ಶುಲ್ಕ 700/- ರೂಗಳೊಂದಿಗೆ ವಿಶೇಷ ದಂಡ ಶುಲ್ಕ 1320/- ರೂಗಳೊಂದಿಗೆ ಅವಕಾಶ ನೀಡಲಾಗಿತ್ತು.

ಆದರೆ ಪರೀಕ್ಷಾ ದಿನಾಂಕಗಳು ವಿಸ್ತರಣೆ ಆಗಿರುವ ಹಿನ್ನಲೆಯಲ್ಲಿ ಹಾಗೂ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಪಾವತಿಸಲು ಮನವಿಗಳು ಸ್ವೀಕೃತವಾಗಿರುವುದರಿಂದ, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಮತ್ತೊಮ್ಮೆ ಖಾಸಗಿ ಹಾಗೂ ಪುನರಾವರ್ತಿತ ವಿದ್ಯಾರ್ಥಿಗಳಿಗೆ ದಿನಾಂಕ: 09/03/2022 ರಿಂದ 12/03/2022ರ ವರೆಗೆ ಈ ಹಿಂದಿನಂತೆ ಪರೀಕ್ಷಾ ಶುಲ್ಕದ ಜೊತೆಗೆ ದಂಡ ಶುಲ್ಕ ಹಾಗೂ ವಿಶೇಷ ದಂಡ ಶುಲ್ಕವನ್ನು ಪಾವತಿಸಲು ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಿ ಆದೇಶಿಸಲಾಗಿದೆ. ಯಾವುದೇ ಕಾರಣಕ್ಕೂ ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕವನ್ನು ಪುನಃ ವಿಸ್ತರಿಸಲಾಗುವುದಿಲ್ಲ.

| ಕ್ರ ಸಂ. | ವಿವರ | ಅಭ್ಯರ್ಥಿಗಳು ಕಾಲೇಜಿಗೆ ಶುಲ್ಕ ಪಾವತಿಸಲು ದಿನಾಂಕ | ಕಾಲೇಜಿನವರು ಶುಲ್ಕವನ್ನು ಖಜಾನೆಗೆ ಸಂದಾಯ ಮಾಡುವ ದಿನಾಂಕ | ಕಾಲೇಜಿನವರು ಅರ್ಜಿಗಳನ್ನು SATS Portal ನಲ್ಲಿ ಭರ್ತಿಮಾಡಲು ಕೊನೇ ದಿನಾಂಕ | ಕಾಲೇಜಿನವರು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಅರ್ಜಿಗಳನ್ನು ಸಲ್ಲಿಸಬೇಕಾದ ದಿನಾಂಕ |
|---|---|---|---|---|---|
| 1. | ಪರೀಕ್ಷಾ ಶುಲ್ಕದ ಜೊತೆಗೆ ದಂಡಶುಲ್ಕ 500/- ರೂ ಮತ್ತು 700/-ರೂಗಳ ಜೊತೆಗೆ ವಿಶೇಷ ದಂಡ ಶುಲ್ಕ 1320/- ರೂಗಳು | 09-03-2022 ರಿಂದ 12-03-2022 | 14-03-2022 | 15-03-2022 | 16-03-2022 |

ಪ್ರಾಂಶುಪಾಲರಿಂದ ಸ್ವೀಕರಿಸಿದ ಅರ್ಜಿಗಳನ್ನು SATS PORTAL ನಲ್ಲಿ update ಮಾಡಿರುವುದನ್ನು ಜಿಲ್ಲಾ ಉಪನಿರ್ದೇಶಕರುಗಳು ಖಾತ್ರಿ ಪಡಿಸಿಕೊಳ್ಳುವುದು. ಖಾಸಗಿ ಅಭ್ಯರ್ಥಿಗಳಿಂದ ಮುಚ್ಚಳಿಕೆ ಪತ್ರ, ಶುಲ್ಕ ಪಾವತಿಸಿದ ಮೂಲ ಚಲನ್, ಕ್ರೋಢೀಕೃತ ವಿದ್ಯಾರ್ಥಿಗಳ ಪಟ್ಟಿ, ದೃಢೀಕರಿಸಿದ ಎಸ್.ಎಸ್.ಎಲ್.ಸಿ ಅಂಕಪಟ್ಟಿ, ವರ್ಗಾವಣೆ ಪತ್ರದ ಜೆರಾಕ್ಸ್ ಪ್ರತಿ, ಚೆಕ್ ಲಿಸ್ಟ್ ಹಾಗೂ ಪುನರಾವರ್ತಿತ ವಿದ್ಯಾರ್ಥಿಗಳಿಂದ ಮೂಲ ಎಂ.ಸಿ.ಎ, ಶುಲ್ಕ ಪಾವತಿಸಿದ ಮೂಲ ಚಲನ್, ಕ್ರೋಢೀಕೃತ ವಿದ್ಯಾರ್ಥಿಗಳ ಪಟ್ಟಿ ಮತ್ತು ಚೆಕ್ ಲಿಸ್ಟ್ ಗಳನ್ನು ಪಡೆದು ಸ್ಕ್ಯಾನ್ ಮಾಡಿ jdexam.dpue@gmail.com ವಿಳಾಸಕ್ಕೆ ಇ-ಮೇಲ್ ಮುಖಾಂತರ ದಿನಾಂಕ : 16-03-2022 ರೊಳಗೆ ಸಲ್ಲಿಸಲು ಸೂಚಿಸಿದೆ.

08/03/22
ನಿರ್ದೇಶಕರು(ಪರೀಕ್ಷೆ)
ಪದವಿ ಪೂರ್ವ ಶಿಕ್ಷಣ ಇಲಾಖೆ

**ಪ್ರತಿಗಳು:**

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರುಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ. (ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು).
2. ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ. (ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು).
3. ಸಹಾಯಕ ನಿರ್ದೇಶಕರು, ಗಣಕಶಾಖೆ, ಪ.ಪೂ.ಶಿ.ಇಲಾಖೆ.
4. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಪ.ಪೂ.ಶಿ.ಇಲಾಖೆ. (ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು).
5. ಕಛೇರಿ ಪ್ರತಿ.

Pallavi 9/3/22